## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಶ್ರೀಕಾಂತ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ವಾರಂಬಳ್ಳಿ ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ, ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನಂತೆ ಕ್ರಮ ಜರುಗಿಸುವ ಬಗ್ಗೆ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/739/ಗ್ರಾಪಂಕಾ/2016, ದಿನಾಂಕ:27.12.2016.
2. ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE/16/2017/ARE-10, Dt:27.07.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಶಿಫಾರಸ್ಸು ಸಂಖ್ಯೆ: UPLOK-2/DE/16/2017/ARE-10, Dt:29.07.2017.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: UPLOK-2/DE/16/2017/ARE-10, Dt:31.07.2017.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/660/ಗ್ರಾಪಂಕಾ/2017, ದಿನಾಂಕ:09.08.2017.
6. ಶ್ರೀ ಶ್ರೀಕಾಂತ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:13.10.2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಶ್ರೀಕಾಂತ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ವಾರಂಬಳ್ಳಿ ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ, ಇವರ ವಿರುದ್ಧ ಇಲ್ಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**—

ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ಶ್ರೀ ಶ್ರೀಕಾಂತ್, ವಾರಂಬಳ್ಳಿ ಗ್ರಾಮ ಪಂಚಾಯಿತಿ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

> "The Charge levelled against the DGO was that, while he was working as Panchayath Development Officer in Varamballi, Brahmavara, Udupi Taluk and District, has issued licence No.45/2008 for putting up construction of temple on site No.197/44 in favour of Shri. A Jayaveluswamy, claimed to be trustee of Shri Adimastikambika temple though he had no valid title or ownership over the said site and the site was allotted to one Thimma Poojari for construction of house for his own use. Thus, DGO failed to take any action against the

construction of temple by encroaching on the Government land in violation of the sanctioned plan. Thereby, the DGO has failed to

maintain absolute integrity besides devotion to duty and rendered himself as unbecoming of a Government Servant committed misconduct within the meaning of Rule 3(1) (i) to (iii) of the Karnataka Civil Service (Conduct) Rules, 1966."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಶ್ರೀಕಾಂತ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ವಾರಂಬಳ್ಳಿ ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಶ್ರೀಕಾಂತ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ವಾರಂಬಳ್ಳಿ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ, ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(ಎ)ರ ಅನ್ವಯ **"ನಿವೃತ್ತಿ ಸೌಲಭ್ಯದಲ್ಲಿ ಶೇಕಡ 5%ರಷ್ಟು ಮೊತ್ತವನ್ನು ನಿರಂತರವಾಗಿ ಕಟಾಯಿಸುವ"** ದಂಡನೆಯನ್ನು ವಿಧಿಸಲು ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ಶ್ರೀಕಾಂತ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ವಾರಂಬಳ್ಳಿ ಗ್ರಾಮ ಪಂಚಾಯತಿ, ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (5) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟಿಸಿಗೆ ಅವರು ಮೇಲೆ ಕ್ರಮ ಸಂಖ್ಯೆ (6) ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

> "ಉಡುಪಿ ಜಿಲ್ಲೆ ಉಡುಪಿ ತಾಲ್ಲೂಕಿನ ವಾರಂಬಳ್ಳಿ ಗ್ರಾಮ ಪಂಚಾಯತಿಗೆ ದಿನಾಂಕ: 05-04-2010 ರಂದು ತಾವು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿದ್ದು, ಶ್ರೀ ತಿಮ್ಮಪೂಜಾರಿಯವರಿಗೆ ಮನೆ ನಿರ್ಮಿಸುವ ಸಲುವಾಗಿ ಸಂ.ನಂ. 197/44 ಸಂಖ್ಯೆಯಲ್ಲಿ 2.75 ಸೆನ್ಸ್ ಅಳತೆಯ ನಿವೇಶನ ಹಂಚಿಕೆ ಮಾಡಿತ್ತು. ವಾರಂಬಳ್ಳಿ ಗ್ರಾಮ ಪಂಚಾಯತಿಯಲ್ಲಿ 2008ರಲ್ಲಿ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದವರಿಗೆ ಕಟ್ಟಡ ಪರವಾನಿಗೆ ಅರ್ಜಿ ಸಲ್ಲಿಸಿದ್ದು, ಅರ್ಜಿಯ ವಿವರಣೆಯಂತೆ ಸದರಿ ನಿವೇಶನದಲ್ಲಿ ದೇವಸ್ಥಾನ ನಿರ್ಮಿಸಲು ಆದಿಮಸ್ತಂಬಿಕ ದೇವಸ್ಥಾನದ ಟ್ರಸ್ಟಿಯಾದ ಶ್ರೀ ಎ.ಜಯವೇಲು ಸ್ವಾಮಿ ಇವರು ಸದರಿ ನಿವೇಶನದ ಮೇಲೆ ಮಾಲೀಕತ್ವದ ಹಕ್ಕು ಹೊಂದಿಲ್ಲದಿದ್ದರೂ ಸಹ ದೇವಸ್ಥಾನ ನಿರ್ಮಿಸಲು ಲೈಸೆನ್ಸ್ ಸಂಖ್ಯೆ 45/2008ನ್ನು 2008ನೇ ಸಾಲಿನಲ್ಲಿ ಈ ಮುಂಚೆ ಇದ್ದ ಕಾರ್ಯದರ್ಶಿಯವರು ನೀಡಿರುತ್ತಾರೆ. ಸದರಿ ವಿಷಯ ತಮಗೆ ಸಂಬಂಧಿಸಿರುವುದಿಲ್ಲ. ತಾವು ಈ ಬಗ್ಗೆ ಪರಿಶೀಲಿಸಿ ತಮ್ಮ ವಿರುದ್ಧ ಇಲಾಖಾ ವಿಚಾರಣೆ ಕ್ರಮ ಜರುಗಿಸುವುದನ್ನು ಕೈಬಿಡಬೇಕು. ಒಟ್ಟಾರೆ ನನ್ನ ಕರ್ತವ್ಯದ ಅವಧಿಯಲ್ಲಿ ಯಾವುದೇ ಕಾನೂನು ಬಾಹಿರ ಕೆಲಸ ಮಾಡಿರುವುದಿಲ್ಲ. ಆದುದರಿಂದ ಈ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿ ಈ ಪ್ರಕರಣದಿಂದ ಮುಕ್ತಗೊಳಿಸುವಂತೆ ಆರೋಪಿತ ನೌಕರರು ವಿನಂತಿಸಿಕೊಂಡಿರುತ್ತಾರೆ".

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ಪ್ರಮುಖವಾಗಿ ವರದಿಯಲ್ಲಿ ಮೇಲ್ಕಂಡ ಅಂಶಗಳನ್ನು ಅಲ್ಲಗಳೆಯಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ. ಅವುಗಳ ಸಂಕ್ಷಿಪ್ತ ಸಾರಾಂಶ ಈ ಕೆಳಗಿನಂತಿದೆ.

Sri Jayaveluswamy was not entitled to construct the temple and though the site was allotted to Thimma Poojari for construction of residential house, Sri Jayaveluswamy has illegally constructed the temple in the said site and DGO has issued licence to construct the temple. The DGO has not taken any step tp remove the encroachment made on the Government land and put up the construction in violation of the sanctioned plan, inspite of directions issued by the higher authorities.

The copy of the licence EX P 4 shows that the Secretary of Gram Panchayat has issued the construction licence. The copy of sketch Ex P 6 shows that the plan is approved for total area of 1930.50sq.ft but the RTC extract Ex p7 shows that the property bearing Sy.No.197/44 measuring 2.75 cents was only standing in the name of Thimma Poojari S/o Koraga Poojari. Accordingly to the RTC extract, hakkupatra was given to Thimma Poojari. This fact shows that the property allotted to Sri Thimma Poojari S/o Koraga Poojari was only for residential purpose.

The total measurement is approximately 1200 sqft. To Put up a construction in the said area, the set back to be left and the owner of property is entitled to put up the construction in the area measuring 900 sqft after leaving the aet back . But the copy of construction licence clearly shows that the DGO has issued the licence to construct the building in the area measuring 1930.50sqft. Further Jayaveluswamy has encroached the Government property, but DGO has not taken any action. The complainant also submitted his representation to the DC, CEO, PDO and the president, Revenue Inspector, Tahasildar, but still no action is taken till today. Inspite of service of notice, the DGO remained absent and he was placed ex-parte. The evidence on record remained unchallenged. The attitude of DGO strengthens the contention of Disciplinary Authority.

The oral and documentary evidence on record clearly reveals that DGO Sri.Shrikanth who was working as PDO of Varamballi Grama Panchayat, has issued licence no.45/2008 for putting up construction of temple in site no 197/44 in favour of Sri A Jayaveluswamy claimed to be trustee of Sri Adimastambika Temple though he had no valid title of ownership over the said site, though the government allotted site measuring 2.75 cents bearing Sy.No.197/44 in Varamballi village to Sri Thimma Poojari only for construction of house for own use of allottee , failed to take action against the construction of temple encroaching the government land and construction of temple encroaching the government land and construction put up in violation of sanctioned plan.

Thereby the DGO being a Government/Public Servant has failed to maintain absolute integrity besides devotion to duty and acted in a manner unbecoming of a Government servant. Hence, I proceed to answer point No.1 in the affirmative.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀರ್ವತೆಗೆ ಅನುಗುಣವಾಗಿ ಶ್ರೀ ಶ್ರೀಕಾಂತ್, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ವಾರಂಬಳ್ಳಿ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ ರವರಿಗೆ " ನಿವೃತ್ತಿ ಸೌಲಭ್ಯದಲ್ಲಿ ಶೇ.5ರಷ್ಟು ಮೊತ್ತವನ್ನು ನಿರಂತರವಾಗಿ ಕಟಾಯಿಸುವ " ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ. ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತವೆ. ಆದುದರಿಂದ ಶ್ರೀ ಶ್ರೀಕಾಂತ್ ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಪರಿಶೀಲಿಸಿ ಶ್ರೀ ಶ್ರೀಕಾಂತ್, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ವಾರಂಬಳ್ಳಿ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(ಎ)ರ ಅನ್ವಯ "ನಿವೃತ್ತಿ ಸೌಲಭ್ಯದಲ್ಲಿ ಶೇ.5ರಷ್ಟು ಮೊತ್ತವನ್ನು ನಿರಂತರವಾಗಿ ಕಟಾಯಿಸುವ " ದಂಡನೆ ವಿಧಿಸಲು ನಿರ್ಣಯಿಸಿದೆ.

ಆದುದರಿಂದ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/660/ಗ್ರಾಪಂಕಾ/2017,**
**ಬೆಂಗಳೂರು, ದಿನಾಂಕ:14-03-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಶ್ರೀಕಾಂತ್, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ವಾರಂಬಳ್ಳಿ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(ಎ)ರ ಅನ್ವಯ "ನಿವೃತ್ತಿ ಸೌಲಭ್ಯದಲ್ಲಿ ಶೇ.5ರಷ್ಟು ಮೊತ್ತವನ್ನು ನಿರಂತರವಾಗಿ ಕಟಾಯಿಸುವ " ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

14/3

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ.
7. ಶ್ರೀ ಶ್ರೀಕಾಂತ್, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ವಾರಂಬಳ್ಳಿ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.